ಕರ್ನಾಟಕ ಸರ್ಕಾರ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ/19/ಸುತ್ತೋಲೆ/2025-26/ವಿ.ವೇ

ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು -560001.
ದಿನಾಂಕ: 20.11.2025.

## ಸುತ್ತೋಲೆ

ವಿಷಯ: 2025-26ನೇ ಸಾಲಿಗೆ ಸರ್ಕಾರಿ ಮತ್ತು ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ವಿದ್ಯಾರ್ಥಿ ವೇತನ ಮಂಜೂರಾತಿಗಾಗಿ ಎಸ್.ಎಸ್.ಪಿ ಪೋರ್ಟಲ್ ಮೂಲಕ ಅರ್ಜಿ ಸಲ್ಲಿಸುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಇಡಿ/68/ಹೆಚ್.ಪಿ.ಸಿ/2025, ಬೆಂಗಳೂರು, ದಿನಾಂಕ:08.04.2025.
2. ಈ ಕಛೇರಿಯ ಸಮ ಸಂಖ್ಯೆಯ ಪತ್ರಗಳ ದಿನಾಂಕ: 08.04.2025.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಆದೇಶದ ಅನ್ವಯ 2025-26ನೇ ಸಾಲಿಗೆ ಸರ್ಕಾರಿ/ಅನುದಾನಿತ ಪದವಿ ಮತ್ತು ಸ್ನಾತಕೋತ್ತರ ಪದವಿ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿ/ವಿದ್ಯಾರ್ಥಿನಿಯರು ಇಲಾಖೆಯಿಂದ ಮಂಜೂರು ಮಾಡುತ್ತಿರುವ ಸಂಚಿ ಹೊನ್ನಮ್ಮ, ಸರ್.ಸಿ.ವಿ.ರಾಮನ್ ವಿದ್ಯಾರ್ಥಿವೇತನ, ಹೆಚ್.ಐ.ವಿ/ಲೆಪ್ರಸಿ ವಿದ್ಯಾರ್ಥಿವೇತನ, ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ, ಹಾಗೂ ಪದವಿ ತರಗತಿಯಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ ಮಂಜೂರಾತಿಗಾಗಿ ಎಸ್.ಎಸ್.ಪಿ ಪೋರ್ಟಲ್‌ನ Link: https://ssp.postmatric.karnataka.gov.in/ ಮೂಲಕ **ದಿನಾಂಕ:15.12.2025** ರೊಳಗೆ ಅರ್ಜಿ ಸಲ್ಲಿಸಲು ಸೂಚಿಸಲಾಗಿದೆ.

<table>
<tr><th>ಕ್ರ. ಸಂ</th><th>ವಿದ್ಯಾರ್ಥಿವೇತನ ಯೋಜನೆಯ ಹೆಸರು</th><th>ಅರ್ಜಿ ಸಲ್ಲಿಸಲು ಬೇಕಿರುವ ಅರ್ಹತೆ</th><th>ಅರ್ಜಿ ಸಲ್ಲಿಸುವ ಬಗ್ಗೆ</th></tr>
<tr><td>1.</td><td>ಸಂಚಿ ಹೊನ್ನಮ್ಮ ಪ್ರತಿಭಾ ವಿದ್ಯಾರ್ಥಿವೇತನ</td><td>ಕಲಾ ಮತ್ತು ವಾಣಿಜ್ಯ ಪದವಿ ತರಗತಿಯ ವಿದ್ಯಾರ್ಥಿನಿಯರು ಮಾತ್ರ</td><td rowspan="5">1 ರಿಂದ 5 ರವರೆಗಿನ ವಿದ್ಯಾರ್ಥಿವೇತನಕ್ಕೆ ವಿದ್ಯಾರ್ಥಿಗಳು ಎಸ್.ಎಸ್.ಪಿ ಪೋರ್ಟಲ್ ಮೂಲಕ ಒಂದೇ ಅರ್ಜಿಯನ್ನು ಸಲ್ಲಿಸಬೇಕು</td></tr>
<tr><td>2.</td><td>ಸರ್.ಸಿ.ವಿ.ರಾಮನ್ ಪ್ರತಿಭಾ ವಿದ್ಯಾರ್ಥಿವೇತನ</td><td>ವಿಜ್ಞಾನ ಪದವಿ ತರಗತಿಯ ವಿದ್ಯಾರ್ಥಿ/ ವಿದ್ಯಾರ್ಥಿನಿಯರು</td></tr>
<tr><td>3.</td><td>ವಿಶೇಷ ಪಾಲನೆ ಮತ್ತು ವಿಶೇಷ ವರ್ಗದ ವಿದ್ಯಾರ್ಥಿವೇತನ</td><td>ಸರ್ಕಾರಿ, ಅನುದಾನಿತ/ಅನುದಾನರಹಿತ ಪದವಿ/ ಸ್ನಾತಕೋತ್ತರ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿಶೇಷ ಪಾಲನೆ ಮತ್ತು ವಿಶೇಷ ವರ್ಗಕ್ಕೆ ಸೇರಿದ ವಿದ್ಯಾರ್ಥಿಗಳು ಅಥವಾ ಸದರಿ ಪೋಷಕರ ಮಕ್ಕಳು</td></tr>
<tr><td>4.</td><td>ಸೈನಿಕ ಸಿಬ್ಬಂದಿ ಮಕ್ಕಳ ಕಾಲೇಜು ಶುಲ್ಕ ಮರುಪಾವತಿ</td><td>ಸರ್ಕಾರಿ ಮತ್ತು ಅನುದಾನಿತ ಪದವಿ ಕಾಲೇಜುಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ಸೈನಿಕ ಸಿಬ್ಬಂದಿ ಮಕ್ಕಳು</td></tr>
<tr><td>5.</td><td>ಹೆಣ್ಣು ಮಕ್ಕಳ ಶುಲ್ಕ ಮರುಪಾವತಿ</td><td>ಸರ್ಕಾರಿ ಪದವಿ ಮತ್ತು ಸ್ನಾತಕೋತ್ತರ ಕಾಲೇಜುಗಳಿಗೆ ಪ್ರವೇಶ ಪಡೆದು ವಿದ್ಯಾಭ್ಯಾಸ ಮಾಡುತ್ತಿರುವ ಎಲ್ಲಾ ವರ್ಗದ ವಿದ್ಯಾರ್ಥಿನಿಯರು</td></tr>
</table>

Manjula

ಆಯುಕ್ತರು,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಇವರಿಗೆ,
1. ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ, ಬೆಂಗಳೂರು, ಮೈಸೂರು, ಮಂಗಳೂರು, ಶಿವಮೊಗ್ಗ, ಧಾರವಾಡ, ಕಲಬುರಗಿ.
2. ಇಲಾಖಾ ವ್ಯಾಪ್ತಿಯ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳಿಗೆ - ಕಾಲೇಜಿನ ಸೂಚನಾ ಫಲಕದಲ್ಲಿ ಸುತ್ತೋಲೆಯನ್ನು ಪ್ರಕಟಿಸಿ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರುವುದು.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು ವೆಬ್ ಸೈಟ್ ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.